ಕಛೇರಿ ದೂರವಾಣಿ : +91 80 23354039
+91 80 23354085
ಇ-ಮೇಲ್: com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

### ಕನ್ನಡ ಕಾಯಕ ವರ್ಷಾಚರಣೆ

ಸಂಖ್ಯೆ:NVBDCP/EST7C/COVID19/2020-21 ದಿನಾಂಕ:03-03-2021

**ಸುತ್ತೋಲೆ**

ವಿಷಯ: ಕೋವಿಡ್ ಪ್ರಕರಣಗಳು ಹೆಚ್ಚಳವಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು.
ಉಲ್ಲೇಖ: ರಾಜ್ಯ ಮಟ್ಟದ ಕೋವಿಡ್ 19 ತಾಂತ್ರಿಕ ಸಲಹಾ ಸಮಿತಿಯ ೮೦ನೇ ಸಭಾ ನಡಾವಳಿಗಳು, ದಿನಾಂಕ: 01.03.2021.

ಪ್ರಸ್ತುತ, ರಾಜ್ಯದಲ್ಲಿ ಕೋವಿಡ್ 19 ಪ್ರಕರಣಗಳ ಸಂಖ್ಯೆಯು ಗಣನೀಯವಾಗಿ ಕಡಿಮೆಯಾಗಿದ್ದರೂ ಸಹ, ಅಲ್ಲಲ್ಲಿ ಗುಂಪು ಗುಂಪಾಗಿ ಕೋವಿಡ್ ಪ್ರಕರಣಗಳು ವರದಿಯಾಗುತ್ತಿರುವುದರಿಂದ, ಎರಡನೇ ಅಲೆಯ ಅಪಾಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ , ಉಲ್ಲೇಖದ ಅನ್ವಯ ಈ ಕೆಳಗಿನ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ.

1. ಯಾವುದೇ ವಸತಿ ಸಮುಚ್ಚಯ ಸಂಕೀರ್ಣ (Apartment complex ) ಗಳು / ಪ್ರದೇಶಗಳಲ್ಲಿ 5 ಅಥವಾ ಅದಕ್ಕಿಂತ ಹೆಚ್ಚು ಕೋವಿಡ್ ಪ್ರಕರಣಗಳು ವರದಿಯಾದ ಪಕ್ಷದಲ್ಲಿ, ಸದರಿ, ಸಂಕೀರ್ಣ /ಪ್ರದೇಶವನ್ನು 'ಕಂಟೇನ್ಮೆಂಟ್ ವಲಯ' ವೆಂದು ಗುರುತಿಸಿ, ಶಿಷ್ಟಾಚಾರದ ಅನ್ವಯ ಅಗತ್ಯ ಕೋವಿಡ್ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.
2. ಸಾರ್ವಜನಿಕ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದನ್ನು ಕಡ್ಡಾಯಗೊಳಿಸುವುದು. ಹಾಗೂ ಈ ಕ್ರಮವನ್ನು ಜಾರಿಗೊಳಿಸಲು ಮಾರ್ಷಲ್ / ಪೋಲೀಸ್ ಸಿಬ್ಬಂದಿಗಳ ಸಹಾಯವನ್ನು ಪಡೆಯುವುದು.
3. ಮುಚ್ಚಿದ ಸಂರಚನೆಯನ್ನು ( closed areas) ಹೊಂದಿದ ಸ್ಥಳಗಳಾದ ರೆಸ್ಟೋರೆಂಟ್‌ಗಳು, ಪಬ್ ಗಳು, ಕೆಫೆಟೀರಿಯಾ / ಹೊಟೇಲ್‌ಗಳು, ಶೈಕ್ಷಣಿಕ ಸಂಸ್ಥೆಗಳು, ಹಾಸ್ಟೆಲ್‌ಗಳು, ಕಛೇರಿಗಳು , ಕಾರ್ಖಾನೆ ಇತ್ಯಾದಿ ಪ್ರದೇಶಗಳಲ್ಲಿ ಮಾರ್ಷಲ್ / ಪೋಲೀಸ್ ಸಿಬ್ಬಂದಿಗಳ ನೆರವಿನಿಂದ ದೈಹಿಕ ಅಂತರದ ಪಾಲನೆಯನ್ನು ಜಾರಿಗೊಳಿಸುವುದು.
4. ಹಾಸ್ಟೆಲ್ / ಬೋರ್ಡಿಂಗ್ , ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು, ಹೊಟೇಲ್, ರೆಸ್ಟೋರೆಂಟ್, ಪಬ್, ಕೇಟರಿಂಗ್ ಏಜೆನ್ಸಿಗಳ ಅಡುಗೆ ಸಿಬ್ಬಂದಿ ಹಾಗೂ ಇತರ ಸೇವೆಗಳನ್ನು ಒದಗಿಸುವ ಸಿಬ್ಬಂದಿಗಳು, ಸಿದ್ಧ ಉಡುಪು ಕಾರ್ಖಾನೆಗಳ (garment factories) ಸಿಬ್ಬಂದಿ, ಕಛೇರಿಗಳು, ಮುಚ್ಚಿದ ಸಂರಚನೆ ಮತ್ತು ಹೆಚ್ಚಿನ ಜನ ಸಂದಣಿಯಿರುವ ಪ್ರದೇಶಗಳ ಅಂಗಡಿ ಮಾಲೀಕರು, ಪ್ರವಾಸೋದ್ಯಮ ಸ್ಥಳಗಳು, ಧೀರ್ಘ ಕಾಲದವರೆಗೂ ಆರೈಕೆ ನೀಡುವ ಕೇಂದ್ರಗಳು (long term care facilities like old age homes, dementia centers), ಇತ್ಯಾದಿ ಗಳಲ್ಲಿನ ಸಿಬ್ಬಂದಿಗಳು ಪ್ರತಿ 15 ದಿನಗಳಿಗೆ ಒಮ್ಮೆ ಆರ್‌ಟಿ – ಪಿಸಿಆರ್ ಪರೀಕ್ಷೆಗೆ (pooling of 1:5 in lab) ಒಳಪಡುವುದು ಕಡ್ಡಾಯವಾಗಿರುತ್ತದೆ.

5. ಹೈರಿಸ್ಕ್ ಪ್ರದೇಶಗಳಲ್ಲಿರುವ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಿತರನ್ನು ಶೀಘ್ರವಾಗಿ ಪತ್ತೆ ಹಚ್ಚುವುದು ಹಾಗೂ ಪರೀಕ್ಷಿಸುವ ನಿಟ್ಟಿನಲ್ಲಿ (1:20) ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

6. ಮನೆಯಲ್ಲಿ ಪ್ರತ್ಯೇಕವಾಗಿರುವ ಕೋವಿಡ್-19 ಸೋಂಕಿತರನ್ನು ದಿನಬಿಟ್ಟು-ದಿನ ಸಂಪರ್ಕಿಸಿ ಚಿಕಿತ್ಸೆಯ ಸರದಿ ನಿರ್ಧಾರ (Triage) ಮಾಡುವುದು ಹಾಗೂ ಅಗತ್ಯ ಇದ್ದಲ್ಲಿ ಹೆಚ್ಚಿನ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸುವುದು.

ಆದ್ದರಿಂದ, ಕೋವಿಡ್ ನಿಯಂತ್ರಣಕ್ಕಾಗಿ ಈ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

ಆಯುಕ್ತರು
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**

**ಪ್ರತಿಯನ್ನು,**

1. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು – ಜಿಲ್ಲಾ ಪಂಚಾಯತ್ ,ಎಲ್ಲಾ ಜಿಲ್ಲೆಗಳು
3. ಜಿಲ್ಲಾ ಆರೋಗ್ಯಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
4. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
5. ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.

**ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.**

1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
2. ವಿಶೇಷ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ಅಭಿಯಾನ ನಿರ್ದೇಶಕರು ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಬೆಂಗಳೂರು.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.

**ಪ್ರತಿಯನ್ನು ಅವಗಾಹನೆಗಾಗಿ ಸಲ್ಲಿಸಿದೆ.**

ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ವಿಕಾಸಸೌಧ, ಬೆಂಗಳೂರು.